ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ 01 ಸಿಡಿಸಿ (2) 2017-18 / 939

ನಿರ್ದೇಶಕರ ಕಛೇರಿ
ಅರಮನೆ ರಸ್ತೆ
ಬೆಂಗಳೂರು 560 001
ದಿ: 01-06-2017

**-:ಸುತ್ತೋಲೆ:-**

ವಿಷಯ: ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹಾವೇರಿ, ಇಲ್ಲಿ NITTTR Kolkata ಇವರ ಸಹಯೋಗದೊಂದಿಗೆ ಹಮ್ಮಿಕೊಂಡಿರುವ ಅಲ್ಪಾವಧಿ ತರಬೇತಿ ಕಾರ್ಯಕ್ರಮಕ್ಕೆ ಅನುಮತಿ ನೀಡುವ ಬಗ್ಗೆ.

ಉಲ್ಲೇಖ: 1. ಪ್ರಾಚಾರ್ಯರು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹಾವೇರಿ, ಇವರ ಪತ್ರ ಸಂ: ಸಇಕಾಹಾ//ಇಎಸ್‌ಟಿ/2017/138, ದಿ: 27-05-2017.

2. ಎನ್‌ಐಟಿಟಿಟಿಆರ್ ಕೋಲ್ಕತ್ತಾ ಇವರ ಅನುಮತಿ ಪತ್ರ ಸಂಖ್ಯೆ: NITTTR-K/Acad/IHP/2017-18/249, ದಿನಾಂಕ: 03-05-2017.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರಗಳನ್ವಯ NITTTR Kolkata ಇವರ ಸಹಯೋಗದೊಂದಿಗೆ ದಿನಾಂಕ:19-06-2017 ರಿಂದ ದಿನಾಂಕ:23-06-2017ರವರೆಗೆ **"Finite Element Method in Engineering"** ಎಂಬ ವಿಷಯದಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹಾವೇರಿ ಇಲ್ಲಿ ರಾಜ್ಯದ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿವಿಲ್ ಹಾಗೂ ಯಾಂತ್ರಿಕ ವಿಭಾಗದ ಬೋಧಕ ಸಿಬ್ಬಂದಿಗಳಿಗೆ ಅಲ್ಪಾವಧಿ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲು ಉದ್ದೇಶಿಸಿದ್ದು, ಸದರಿ ಅಲ್ಪಾವಧಿ ತರಬೇತಿ ಕಾರ್ಯಕ್ರಮವನ್ನು ಸಂಸ್ಥೆಯಲ್ಲಿ ಆಯೋಜಿಸಲು ಅನುಮತಿ ನೀಡಲಾಗಿದೆ.

ಸದರಿ ಅಲ್ಪಾವಧಿ ತರಬೇತಿಗೆ ಹಾಜರಾಗಲು ಇಚ್ಛಿಸುವ ಬೋಧಕ ಸಿಬ್ಬಂದಿ ವರ್ಗದವರು, ತರಬೇತಿಗೆ ಅರ್ಜಿ ಸಲ್ಲಿಸಿ ನೊಂದಾಯಿಸಿಕೊಳ್ಳುವ ಸಲುವಾಗಿ ಸಂಯೋಜನಾಧಿಕಾರಿಯಾದ ಶ್ರೀ ಬಿ.ಕಾಶಿನಾಥ್, ಸಹಾಯಕ ಪ್ರಾಧ್ಯಾಪಕರು, ಸಿವಿಲ್ ವಿಭಾಗ, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಹಾವೇರಿ ಇವರನ್ನು ಮೊಬೈಲ್ ಸಂಖ್ಯೆ: 9742773572 ಅಥವಾ ಈ-ಮೇಲ್ ಐಡಿ kashinathanu@gmail.com ಮೂಲಕ ಸಂಪರ್ಕಿಸಲು ಸೂಚಿಸಲಾಗಿದೆ.

ತರಬೇತಿಯನ್ನು ಆಯೋಜಿಸಿರುವ ಸಂಸ್ಥೆಯ ಪ್ರಾಚಾರ್ಯರು, ತರಬೇತಿಗೆ ಆಯ್ಕೆಗೊಂಡ ಬೋಧಕ ಸಿಬ್ಬಂದಿ ವರ್ಗದವರ ಪಟ್ಟಿಗೆ ದಿನಾಂಕ:15-06-2017ರೊಳಗಾಗಿ ನಿರ್ದೇಶನಾಲಯದ ಅನುಮೋದನೆ ಪಡೆದು ತರಬೇತಿ ನಡೆಸಲು ಸೂಚಿಸಲಾಗಿದೆ. ಈ ಅಲ್ಪಾವಧಿ ತರಬೇತಿಗೆ ಇಲಾಖೆಯಿಂದ ಯಾವುದೇ ಪ್ರಯಾಣ ಭತ್ಯೆ ಹಾಗೂ ದಿನ ಭತ್ಯೆಗಳನ್ನು ನೀಡುವುದಿಲ್ಲ. ಈ ತರಬೇತಿ ಅವಧಿಯ ಅನುಪಸ್ಥಿತಿಯನ್ನು OOD ಎಂದು ಪರಿಗಣಿಸಲು ಸೂಚಿಸಲಾಗಿದೆ.

ಜಂಟಿ ನಿರ್ದೇಶಕರು(ಸಿಡಿಸಿ)
3/6/17

ಇವರಿಗೆ:- ಪ್ರಾಚಾರ್ಯರು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹಾವೇರಿ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.

ಪ್ರತಿ:-
1. ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳ/ಇಂನಿಯರಿಂಗ್ ಕಾಲೇಜುಗಳ ಪ್ರಾಚಾರ್ಯರುಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.
2. ಇ-ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, 2ನೇ ಮಹಡಿ, ಬೆಂಗಳೂರು ಇವರಿಗೆ ಡಿಟಿಇ ವೆಬ್ ಸೈಟ್ ನಲ್ಲಿ ಪ್ರಕಟಿಸಲು ಮುಂದಿನ ಕ್ರಮಕ್ಕಾಗಿ.